# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 486 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 08.12.2023 |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ 2020-2021 ರಿಂದ 2022-23ನೇ ಸಾಲಿನವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನೇಮಕಾತಿಯಲ್ಲಿ ಹಾಗೂ ಆಹಾರ ಸಾಮಾಗ್ರಿಗಳ ಸರಬರಾಜಿನಲ್ಲಿ ಲಕ್ಷಾಂತರ ರೂಪಾಯಿ ಹಣದ ಅವ್ಯವಹಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬೀದರ್ ಜಿಲ್ಲೆಯಲ್ಲಿ ಟೆಂಡರ್ ಮತ್ತು ನೇಮಕಾತಿಗಳಲ್ಲಿ ಭ್ರಷ್ಟಾಚಾರ ನಡೆದಿರುವ ಸಂಬಂಧ ದಿನಾಂಕ:25.11.2022ರಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ದಿಶಾ ಸಮಿತಿಯ ನಡವಳಿಯಲ್ಲಿ ಪ್ರಸ್ತಾಪವಾಗಿರುತ್ತದೆ. ಈ ಬಗ್ಗೆ ಸದಸ್ಯರು, ರಾಜ್ಯ ಅಭಿವೃದ್ಧಿ ಸಮನ್ವಯ ಮತ್ತು ಮೇಲುಸ್ತುವಾರಿ ದಿಶಾ ಸಮಿತಿ ಇವರು ದಿನಾಂಕ:06.01.2023ರಂದು ವರದಿ ಮಾಡಿರುತ್ತಾರೆ. |
| ಆ) | ಈ ಅವ್ಯವಹಾರದ ಕುರಿತು ಜಿಲ್ಲಾಧಿಕಾರಿಗಳ ಸಭೆಯಲ್ಲಿ ಉನ್ನತ ಮಟ್ಟದ ತನಿಖೆಗೆ ಆದೇಶ ಮಾಡಿ, ಸರ್ಕಾರಕ್ಕೆ ಶಿಫಾರಸ್ಸು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಪ್ರಕರಣದ ಸಂಬಂಧ ಕೂಲಂಕಷ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬೀದರ್ ಇವರಿಗೆ ದಿನಾಂಕ:14.03.2023ರ ಪತ್ರದಲ್ಲಿ ಕೋರಲಾಗಿತ್ತು. ನಂತರ ದಿನಾಂಕ:12.05.2023ರ ಅನುಸರಣಾ ಪತ್ರದಲ್ಲಿ ಕೂಡಾ ಕೋರಲಾಗಿತ್ತು. ಆದರೆ, ಪ್ರಕರಣದ ಸಂಬಂಧ ರಾಜ್ಯಮಟ್ಟದಿಂದಲೇ ಉನ್ನತ ಮಟ್ಟದ ತನಿಖಾ ಸಮಿತಿಯನ್ನು ರಚಿಸುವಂತೆ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬೀದರ್ ಇವರು ದಿನಾಂಕ:20.10.2023ರ ಪತ್ರದಲ್ಲಿ ಕೋರಿರುತ್ತಾರೆ. ಈ ಮಧ್ಯೆ ದಿನಾಂಕ:02.08.2023ರ ಆದೇಶದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಹಿರಿಯ ಅಧಿಕಾರಿಗಳನ್ನೊಳಗೊಂಡ ಉನ್ನತಮಟ್ಟದ ತನಿಖಾ ಸಮಿತಿಯನ್ನು ರಚಿಸಿ ಈಗಾಗಲೇ ಆದೇಶಿಸಲಾಗಿರುತ್ತದೆ. ಸದರಿ ಸಮಿತಿಯಿಂದ ತನಿಖಾ ವರದಿ ನಿರೀಕ್ಷಿಸಲಾಗಿದೆ. |
| ಇ) | ಬಂದಿದ್ದಲ್ಲಿ, ತನಿಖೆ ಮಾಡಲು ತೊಂದರೆಯೇನಾದರೂ ಇದೆಯೇ: ಭ್ರಷ್ಟಾಚಾರವೆಸಗಿರುವ ಅಧಿಕಾರಿಗಳ ರಕ್ಷಣೆ ಮಾಡಲು ಸರ್ಕಾರವು ಹಿಂದೇಟು ಹಾಕುತ್ತಿದೆಯೇ: | ಈಗಾಗಲೇ ಇಲಾಖೆಯಿಂದ ತನಿಖಾ ಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಯಿಂದ ವರದಿ ನಿರೀಕ್ಷಿಸಲಾಗುತ್ತಿದ್ದು, ವರದಿ ಸ್ವೀಕೃತವಾದ ಕೂಡಲೇ ಕುಲಂಕಷವಾಗಿ ಪರಿಶೀಲಿಸಿ ನಿಯಮಾನುಸಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು. |
| ಈ) | ಈ ಭ್ರಷ್ಟಾಚಾರದಲ್ಲಿ ಭಾಗಿಯಾಗಿದ್ದ ಅಧಿಕಾರಿಯೊಬ್ಬರು ಇಲಾಖಾ ಮಂತ್ರಿಗಳ ಆಪ್ತರಾಗಿರುವುದರಿಂದ ಇವರ ರಕ್ಷಣೆಯನ್ನು ಸರ್ಕಾರ ಮಾಡುತ್ತಿದೆ ಎಂದು ಜಿಲ್ಲೆಯಲ್ಲಿ ಸುದ್ದಿಯಾಗಿರುವುದು ನಿಜವೇ: | ಯಾವುದೇ ಅಧಿಕಾರಿಯು ಭ್ರಷ್ಟಾಚಾರದಲ್ಲಿ ಭಾಗಿಯಾಗಿದ್ದಲ್ಲಿ ನಿಯಮಾನುಸಾರ ಕ್ರಮ ಜರುಗಿಸಲಾಗುವುದು. |

ಸಂಖ್ಯೆ:ಮಮಇ 465 ಎಸ್.ಜೆ.ಡಿ 2023

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖಾ ಸಚಿವರು.